ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಯ.ವಿ/ಆ.ಅ/42/2023-24

ಕಾರ್ಯಪಾಲಕ ಅಭಿಯಂತರವರ ಕಛೇರಿ
ಯಲಹಂಕ ವಿಭಾಗ, ಬೃ.ಬೆಂ.ಮ.ಪಾ.
ಬೆಂಗಳೂರು 64 ದಿನಾಂಕ: 12/02/2024

ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ

ವಿಷಯ:- "Construction of Anganavadi building at JPN Colony in ward no:02"

ಉಲ್ಲೇಖ:-ಮಾನ್ಯ ವಲಯ ಆಯುಕ್ತರು, ಯಲಹಂಕ ಬಿಬಿಎಂಪಿ ರವರು ಕಂಡಿಕೆ(06)ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪವಿಭಾಗ) ರವರು **2023-24**ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ ಪಿ-1878 ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಯೋಜನೆಯಡಿಯಲ್ಲಿ ಮೀಸಲಿಟ್ಟಿರುವ ಅನುದಾನದಡಿಯಲ್ಲಿ ಮಂಜೂರಾಗಿರುವ ಕಾಮಗಾರಿಗೆ ಲೋಕೋಪಯೋಗಿ ಇಲಾಖೆಯ ಎಸ್.ಆರ್. ದರಪಟ್ಟಿ, Bangalore Circle for Year 2023-2024 ರಲ್ಲಿ ಮಂಜೂರಾಗಿರುವ ದರಪಟ್ಟಿ ಅನುಸರಿಸಿ ಮೇಲ್ಕಂಡ ಕಾಮಗಾರಿಗೆ ರೂ.50.00ಲಕ್ಷಗಳಿಗೆ ಅಂದಾಜುಪಟ್ಟಿ ತಯಾರಿಸಲಾಗಿದೆ.

ಈ ಹಿನ್ನಲೆಯಲ್ಲಿ ಮೇಲ್ಕಂಡ ಕಾಮಗಾರಿಗೆ ಉಲ್ಲೇಖ ಪತ್ರದಲ್ಲಿ ಮಾನ್ಯ ವಲಯ ಆಯುಕ್ತರು, ಯಲಹಂಕ ಬಿಬಿಎಂಪಿ ರವರು ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ. ಅದರಂತೆ ಮೇಲ್ಕಂಡ ಕಾಮಗಾರಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶಸಂಖ್ಯೆ:ಬಿ12(1)ಪಿ.ಆರ್/394/2023-24 ದಿನಾಂಕ:06-12-2023 ರಂತೆ ನೀಡಿರುವ ಅಧಿಕಾರದನ್ವಯ ಈ ಕೆಳಕಂಡ ಷರತ್ತುಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಪುಟ ಸಂಖ್ಯೆ 30 ಕ್ರ.ಸಂ 42 ರಲ್ಲಿ ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
2. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.

12/2/24

ಕಾರ್ಯಪಾಲಕ ಅಭಿಯಂತರರು,
ಯಲಹಂಕ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು-64

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with OKEN Scanner